ಸಂಬಂಧಿಸಿದಂತೆ, ಷರತ್ತುಗಳನ್ನು ಪೂರೈಸದೇ ಇದ್ದ ಕಾರಣ, ಸರ್ಕಾರಿ ಆದೇಶ ಸಂಖ್ಯೆ: ಆಕುಕ/626/ಸಿಜಿಎಂ/2008 ದಿನಾಂಕ: 21–08–2010ರಲ್ಲಿ ಸದರಿ ಮಂಜೂರಾತಿಯನ್ನು ರದ್ದುಪಡಿಸಿದೆ.

ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕಟ್ಟಡ

208 (722) ಶ್ರೀ ಚಿಕ್ಕನಗೌಡ್ರ ಸಿದ್ದನಗೌಡ ಈಶ್ವರಗೌಡ (ಕುಂದಗೋಳ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಧಾರವಾಡ ಜಿಲ್ಲೆಯ ಕುಂದಗೋಳ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಹೊಸದಾಗಿ ಎರಡು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯಾರಂಭ ಮಾಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಕಟ್ಟಡವನ್ನು ಕಟ್ಟಲು ಅನುದಾನ ಬಿಡುಗಡೆ ಮಾಡಿದಿರಲು ಕಾರಣಗಳೇನು;

(ಇ) ಈ ಸಾಲಿನಲ್ಲಾದರೂ ಅನುದಾನ ಬಿಡುಗಡೆ ಮಾಡಲಾಗುವುದೇ;

(ಈ) ಹಾಗಿದ್ದಲ್ಲಿ, ಯಾವಾಗ ಅನುದಾನ ಬಿಡುಗಡೆ ಮಾಡಲಾಗುವುದು?

ಶ್ರೀ ಅರವಿಂದ ಲಿಂಬಾವಳಿ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ) ಧಾರವಾಡ ಜಿಲ್ಲೆ, ಕುಂದಗೋಳ ಮತಕ್ಷೇತ್ರದ ವ್ಯಾಪ್ತಿಯಲ್ಲಿ 2 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಅಂದರೆ, ಅದರಗುಂಚಿ ಮತ್ತು ಕಮ್ಮಡಹಳ್ಳಿ ಗ್ರಾಮಗಳಿಗೆ ಸರ್ಕಾರವು ಕೆಲವು ಷರತ್ತುಗಳನ್ನು ವಿಧಿಸಿ ಮಂಜೂರು ಮಾಡಿತ್ತು, ನಿಗದಿತ ಸಮಯದಲ್ಲಿ ಷರತ್ತುಗಳನ್ನು ಪೂರೈಸಿದ್ದ ಕಾರಣ, ಅದರಗುಂಚಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಪ್ರಾರಂಭಿಸಲು ಸರ್ಕಾರವು ದಿನಾಂಕ: 18–04–2012 ರಂದು ಅನುಮತಿ ನೀಡಿದೆ. ಮುಂದುವರೆದು, ಕಮ್ಮಡಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಸಂಬಂಧಿಸಿದಂತೆ, ಷರತ್ತುಗಳನ್ನು ಪೂರೈಸಿರುವುದಿಲ್ಲ.

ಆ) ಹಣಕಾಸಿನ ಲಭ್ಯತೆ ಆಧಾರದ ಮೇಲೆ ಅದರಗುಂಚಿ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡ ಕಾಮಗಾರಿಯನ್ನು ತೆಗೆದುಕೊಳ್ಳಬೇಕಾಗುತ್ತದೆ.

ಹೊಸದಾಗಿ ಪ್ರೌಢಶಾಲೆ/ಪದವಿ ಪೂರ್ವ ಕಾಲೇಜು ಪ್ರಾರಂಭಿಸುವುದು

217 (371) ಡಾ. ಶರಣ ಪ್ರಕಾಶ ರುದ್ರಪ್ಪ ಪಾಟೀಲ್ (ಸೇಡಂ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಆಯವ್ಯಯದಲ್ಲಿ ಹೊಸದಾಗಿ ಪ್ರೌಢ ಶಾಲೆ ಮತ್ತು ಪದವಿಪೂರ್ವ ಕಾಲೇಜು ಪ್ರಾರಂಭಿಸಲು ನಿಗದಿಪಡಿಸಿದ ಹಣವೆಷ್ಟು; (ವಿವರ ನೀಡುವುದು)

(ಆ) 2012–13ನೇ ಸಾಲಿನಲ್ಲಿ ಹೊಸದಾಗಿ ಪ್ರೌಢ ಶಾಲೆ/ಪದವಿಪೂರ್ವ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ;

(ಇ) ಹಾಗಿದ್ದಲ್ಲಿ, ಸೇಡಂ ತಾಲ್ಲೂಕು ಹಾಗೂ ಸೇಡಂ ತಾಲ್ಲೂಕಿನ ಮತ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಯಾವ ಸ್ಥಳಗಳಲ್ಲಿ ಪ್ರಾರಂಭಿಸಲಾಗುವುದು; (ವಿವರ ನೀಡುವುದು) ಹೊಸದಾಗಿ ಪ್ರೌಢ ಶಾಲೆ/ಪದವಿ ಪೂರ್ವ ಕಾಲೇಜು ಪ್ರಾರಂಭಿಸಲು ಬಂದಿರುವ ಪ್ರಸ್ತಾವನೆಗಳು ಯಾವುವು? (ವಿವರ ನೀಡುವುದು)

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

ಅ) ಆರ್.ಎಂ.ಎಸ್.ಎ ಅಡಿಯಲ್ಲಿ ಹೊಸದಾಗಿ 138 ಸರ್ಕಾರಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಒಟ್ಟು ರೂ. 11125.56 ಲಕ್ಷಗಳಿಗೆ ಆಯವ್ಯಯ ಸಿದ್ದಪಡಿಸಿ ಕೇಂದ್ರ ಸರ್ಕಾರದ ಅನುಮೋದನೆಗಾಗಿ ಸಲ್ಲಿಸಿದೆ. ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾರಂಭಿಸಲು ಅನುದಾನದ ಲಭ್ಯತೆ ಇಲ್ಲ.

ಆ) 2012–13ನೇ ಸಾಲಿಗೆ ರಾಜ್ಯದ ಅನುದಾನದಲ್ಲಿ ಸರ್ಕಾರಿ ಪ್ರೌಢಶಾಲೆಗಳನ್ನು ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಇರುವುದಿಲ್ಲ.

(ಇ) ಆರ್.ಎಂ.ಎಸ್.ಎ ಅಡಿಯಲ್ಲಿ 2012–13ನೇ ಸಾಲಿಗೆ ಸೇಡಂ ತಾಲ್ಲೂಕಿನಲ್ಲಿ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆ, ರಹಮತ್‌ನಗರ ವನ್ನು ಉನ್ನತೀಕರಿಸಲು ಉಪನಿರ್ದೇಶಕರು ಪ್ರಸ್ತಾವನೆ ಸಲ್ಲಿಸಿದ್ದು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.